107

**ವಿಧಾನ ಪರಿಷತ್ತು ಸದಸ್ಯರಾದ ಶ್ರೀ ಐವನ್ ಡಿ'ಸೋಜಾ ಇವರ ನಿಯಮ 72ರಡಿ ಗಮನ ಸೆಳೆಯುವ ಸೂಚನೆಗೆ ಉತ್ತರ**

**ಸೂಚನೆ:**

ದ.ಕ. ಜಿಲ್ಲೆಯ ಮಂಗಳೂರಿನಲ್ಲಿ ಬ್ಯಾಟರಿ ಚಾಲಿತ ಆಟೋರಿಕ್ಷಾಗಳು ಯಾವುದೇ ಪರ್ಮಿಟ್ ನಿಯಮವಿಲ್ಲದೇ ನಿಲ್ದಾಣಗಳ ನಿಯಮವಿಲ್ಲದೇ ಎಲ್ಲಿ ಬೇಕಾದರೂ ತೆರಳಿ ಬಾಡಿಗೆ ಮಾಡುವ ಮೂಲಕ ಸುಮಾರು 7000 ಪರ್ಮಿಟ್ ಪಡೆದು ಸಾರಿಗೆ ನಿಯಮಗಳನ್ನು ಪರ್ಮಿಟ್ ನಿಯಮಗಳನ್ನು ಪಾಲಿಸಿ, ಬಾಡಿಗೆ ಮಾಡುವ ರಿಕ್ಷಾ ಚಾಲಕರಿಗೆ ತೊಂದರೆಯಾಗುತ್ತಿದ್ದು, ಬಾಡಿಗೆ ಇಲ್ಲದೇ ಒದ್ದಾಡುವ ಪರಿಸ್ಥಿತಿ ನಿರ್ಮಾಣಗೊಂಡು ಗೊಂದಲಗಳು ಉಂಟಾಗಿ, ಸಾರ್ವಜನಿಕರಿಗೂ ಈ ಬಗ್ಗೆ ಗೊಂದಲದ ವಾತಾವರಣ ನಿರ್ಮಾಣವಾಗಿರುವುದರ ಬಗ್ಗೆ ಮಾನ್ಯ ಸಾರಿಗೆ ಸಚಿವರ ಗಮನ ಸೆಳೆಯ ಬಯಸುತ್ತೇನೆ.

**ಉತ್ತರ:**

ಕೇಂದ್ರ ಸರ್ಕಾರದ ಅಧಿಸೂಚನೆ ಸಂಖ್ಯೆ: S.O 5333 (E), ದಿನಾಂಕ:18-10-2018ರಲ್ಲಿ ಮೋಟಾರು ವಾಹನಗಳ ಕಾಯ್ದೆ 1988ರ, ಕಲಂ 66 (3)(ಎನ್)ರಲ್ಲಿ ಪ್ರದತ್ತವಾದ ಅಧಿಕಾರದಡಿ, ಮೆಥನಾಲ್ ಮತ್ತು ಇಥನಾಲ್ ಇಂಧನ ಬಳಸಿ ಸಂಚರಿಸುವ ಸಾರಿಗೆ ವಾಹನಗಳು ಹಾಗೂ ಬ್ಯಾಟರಿ ಆಧಾರಿತ ವಾಹನಗಳಿಗೆ ಸದರಿ ಕಾಯ್ದೆ ಕಲಂ 66 (1)ರಡಿ ರಹದಾರಿ ವಿನಾಯತಿ ನೀಡಿ ಆದೇಶವನ್ನು ಹೊರಡಿಸಲಾಗಿರುತ್ತದೆ ಹಾಗೂ ಕೇಂದ್ರ ಸರ್ಕಾರದ ಅಧಿಸೂಚನೆ ಸಂಖ್ಯೆ: GSR 525 (E), ದಿನಾಂಕ:02-08-2021ರಲ್ಲಿ ಬ್ಯಾಟರಿ ಆಧಾರಿತ ವಾಹನಗಳಿಗೆ ಕೇಂದ್ರ ಮೋಟಾರು ವಾಹನಗಳ ನಿಯಮಗಳು 1989ರ, ನಿಯಮ 81ರಲ್ಲಿ ನಿಗಧಿಪಡಿಸಿರುವ ನೋಂದಣಿ ಶುಲ್ಕದಿಂದ ವಿನಾಯತಿ ನೀಡಿ ಆದೇಶ ಹೊರಡಿಸಲಾಗಿರುತ್ತದೆ.

ಮುಂದುವರೆದು, ರಾಜ್ಯ ಸರ್ಕಾರದ ಅಧಿಸೂಚನೆ ಸಂಖ್ಯೆ:ಟಿಡಿ 2 ಟಿಡಿಓ 2019, ದಿನಾಂಕ:20-01-2022 ರಲ್ಲಿ ಮೋಟಾರು ವಾಹನಗಳ ಕಾಯ್ದೆ 1988ರ, ಕಲಂ 66 (3)(ಎನ್)ರಲ್ಲಿ ಪ್ರದತ್ತವಾದ ಅಧಿಕಾರ ಚಲಾಯಿಸಿ ಬ್ಯಾಟರಿ ಚಾಲಿತ, ಮೆಥನಾಲ್ ಮತ್ತು ಇಥನಾಲ್ ಇಂಧನ ಬಳಕೆಯ ಸಾರಿಗೆ ವಾಹನಗಳಿಗೆ ಸದರಿ ಕಾಯ್ದೆ ಕಲಂ 66 (1)ರಡಿ ರಹದಾರಿ ವಿನಾಯತಿ ನೀಡಿ ಆದೇಶವನ್ನು ಹೊರಡಿಸಲಾಗಿರುತ್ತದೆ.

ಅಧ್ಯಕ್ಷರು, ದಕ್ಷಿಣ ಕನ್ನಡ ಜಿಲ್ಲಾ ಆಟೋರಿಕ್ಷಾ ಚಾಲಕ ಮಾಲಿಕರ ಸಂಘಗಳ ಒಕ್ಕೂಟ, ಮಂಗಳೂರು ಇವರ ಮನವಿ ದಿನಾಂಕ:22-02-2024ರಲ್ಲಿ ನೆರೆಯ ರಾಜ್ಯದಲ್ಲಿ ಬ್ಯಾಟರಿ ಚಾಲಿತ ಸಾರಿಗೆ ವಾಹನಗಳಿಗೆ ಶುಲ್ಕ ರಹಿತ ರಹದಾರಿಯನ್ನು ಕಡ್ಡಾಯಗೊಳಿಸಿದ ರೀತಿಯಲ್ಲಿ ಕರ್ನಾಟಕ ರಾಜ್ಯದಲ್ಲಿನ ಬ್ಯಾಟರಿ ಚಾಲಿತ ಆಟೋರಿಕ್ಷಾಗಳಿಗೆ ಪರವಾನಿಗೆಯನ್ನು ಕಡ್ಡಾಯಗೊಳಿಸಲು ಕೋರಿರುತ್ತಾರೆ.

ರಾಜ್ಯ ಸರ್ಕಾರದ ಅಧಿಸೂಚನೆಯಿಂದ ಬ್ಯಾಟರಿ ಚಾಲಿತ ವಾಹನಗಳು, ಮೆಥನಾಲ್ ಮತ್ತು ಇಥನಾಲ್ ಇಂಧನ ಬಳಸಿ ಸಂಚರಿಸುವ ಸಾರಿಗೆ ವಾಹನಗಳ ನಿಯಂತ್ರಣ ಹಾಗೂ ವಾಹನಗಳ ಮೇಲೆ ನಿಗಾ ವಹಿಸಲು ತೊಂದರೆಯಾಗುತ್ತಿದ್ದು, ಕಾನೂನುಬಾಹಿರ ಚಟುವಟಿಕೆಗಳಲ್ಲಿ ಭಾಗಿಯಾಗಿದ್ದಲ್ಲಿ ಅದರ ವಿರುದ್ಧ ಮೋಟಾರು ವಾಹನಗಳ ಕಾಯ್ದೆ ಮತ್ತು ಅದರಡಿ ರಚಿತವಾದ ನಿಯಮಗಳನ್ವಯ ಕ್ರಮ ಕೈಗೊಳ್ಳಲು ಕಷ್ಟಸಾಧ್ಯವಾಗುವುದಲ್ಲದೆ, ಇತರೆ ಇಂಧನದಿಂದ ಸಂಚರಿಸುವ ವಾಹನಗಳ ಮಾಲೀಕರು / ಚಾಲಕರುಗಳ ನಡುವೆ ತಾರತಮ್ಯತೆ ಉಂಟಾಗುವುದರಿಂದ ಅನಿರೀಕ್ಷಿತ ಅನಾರೋಗ್ಯಕರ ಸ್ಪರ್ಧೆ ಉಂಟಾಗುವ ಸಾಧ್ಯತೆಗಳು ಹೆಚ್ಚಾಗುವುದು ಸಹ ಕಂಡುಬಂದಿರುತ್ತದೆ.

ಈ ಮೇಲ್ಕಂಡ ಅಂಶಗಳಿಂದ ಸರ್ಕಾರದ ಅಧಿಸೂಚನೆ ಸಂಖ್ಯೆ: ಟಿಡಿ 2 ಟಿಡಿಓ 2019, ದಿನಾಂಕ: 20-01-2022 ರಲ್ಲಿ ಮೋಟಾರು ವಾಹನಗಳ ಕಾಯ್ದೆ 1988ರ ಕಲಂ 66(3) (ಎನ್) ರಲ್ಲಿ ಪ್ರದತ್ತವಾದ ಅಧಿಕಾರ ಚಲಾಯಿಸಿ ಬ್ಯಾಟರಿ ಚಾಲಿತ, ಮೆಥನಾಲ್ ಮತ್ತು ಇಥನಾಲ್ ಇಂಧನ ಬಳಕೆಯ ಸಾರಿಗೆ ವಾಹನಗಳಿಗೆ ಸದರಿ ಕಾಯ್ದೆ ಕಲಂ 66(1) ರಡಿ ರಹದಾರಿ ವಿನಾಯಿತಿ ನೀಡಿರುವ ಆದೇಶವನ್ನು ಹಿಂಪಡೆದು ಮೋಟಾರು ವಾಹನಗಳ ಕಾಯ್ದೆ 1988ರ ಕಲಂ 66(3)(ಎನ್) ಮತ್ತು ಕಲಂ 96 (xxxiii) ರಲ್ಲಿ ಪ್ರದತ್ತವಾದ ಅಧಿಕಾರದಡಿ ಬ್ಯಾಟರಿ ಚಾಲಿತ, ಮೆಥನಾಲ್ ಮತ್ತು ಇಥನಾಲ್ ಇಂಧನ ಬಳಕೆಯ ಸಾರಿಗೆ ವಾಹನಗಳಿಗೆ ಸಂಬಂಧಪಟ್ಟ ರಹದಾರಿಯನ್ನು ಶುಲ್ಕ ರಹಿತವಾಗಿ ಮಂಜೂರು ಮಾಡುವ ಕುರಿತಂತೆ ಪ್ರಸ್ತಾವನೆಯು ಪ್ರಸ್ತುತ ಸರ್ಕಾರದ ಪರಿಶೀಲನೆಯಲ್ಲಿರುತ್ತದೆ.

ಸಂಖ್ಯೆ:ಟಿಡಿ32 ಟಿಡಿಕ್ಯೂ2025

**(ರಾಮಲಿಂಗಾರೆಡ್ಡಿ)**
ಸಾರಿಗೆ ಮತ್ತು ಮುಜರಾಯಿ ಸಚಿವರು